# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಬಿ.ಎಸ್.ರಾಮಕೃಷ್ಣ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸೋಮೇನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉಲ್ಲೋಡು ಗ್ರಾಮ ಪಂಚಾಯಿತಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಸಲ್ಲಿಸಿರುವ ಮೇಲ್ಮನವಿಯ ಬಗ್ಗೆ-ಆದೇಶ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ, ರವರ ಆದೇಶ ಸಂಖ್ಯೆ:ಜಿಪಂಚಿ/ಆಡಳಿತ/ಗ್ರಾಪಂಕಾ/ಅಮಾನತ್ತು /ಸಿಆರ್/2017-18, ದಿನಾಂಕ:10-07-2017.
2. ಶ್ರೀಬಿ.ಎಸ್.ರಾಮಕೃಷ್ಣ, ಗ್ರಾಮಪಂಚಾಯಿತಿ ಕಾರ್ಯದರ್ಶಿ, ಇವರು ಸರ್ಕಾರಕ್ಕೆ ಸಲ್ಲಿಸಿದ ಮೇಲ್ಮನವಿ ದಿನಾಂಕ: 03-11-2017.
3. ಸರ್ಕಾರದಿಂದ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿನಾಂಕ:21-02-2018.

ಪ್ರಸ್ತಾವನೆ :

ಶ್ರೀ ಬಿ.ಎಸ್.ರಾಮಕೃಷ್ಣ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸೋಮೇನಹಳ್ಳಿ ಗ್ರಾಮ ಪಂಚಾಯಿತಿ ಇವರು ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಉಲ್ಲೋಡು ಗ್ರಾಮ ಪಂಚಾಯಿತಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಯಾವುದೇ ಪೂರ್ವಾನುಮತಿ ಪಡೆಯದೇ ದಿನಾಂಕ:28-06-2017ರಿಂದ ದಿನಾಂಕ:10-07-2017ರ ವರೆಗೆ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುತ್ತಾರೆ. ಇವರ ಗೈರು ಹಾಜರಿಯಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಕಾರ್ಯಕ್ರಮಗಳು ಸ್ಥಗಿತಗೊಂಡಿದ್ದು, ಕಾರ್ಯನಿರ್ವಾಹಕ ಅಧಿಕಾರಿಗಳು ನೀಡಿದ ಕಾರಣ ಕೇಳುವ ನೋಟೀಸಿಗೆ ಸದರಿ ನೌಕರರು ಸಮಜಾಯಿಷಿಯನ್ನು ನೀಡಿರುವುದಿಲ್ಲ. ಈ ರೀತಿ ಮೇಲಾಧಿಕಾರಿಗಳ ಆದೇಶಗಳನ್ನು ಉಲ್ಲಂಘಿಸಿ ಅಶ್ರದ್ಧೆಯಿಂದ ವರ್ತಿಸಿ ಕರ್ತವ್ಯಲೋಪ ಎಸಗಿರುತ್ತಾರೆ. ಅನಧಿಕೃತ ಗೈರುಹಾಜರಿಯ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ) ನಿಯಮಗಳು 1957ರ ನಿಯಮ 10(1)ರನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರು ತಮ್ಮ ಆದೇಶ ಮೇಲೆ ಓದಲಾದ (1)ರ ಆದೇಶದಲ್ಲಿ ಇಲಾಖಾ ವಿಚಾರಣೆ ಕಾಯ್ದಿರಿಸಿ ಸದರಿ ನೌಕರರನ್ನು ಅಮಾನತ್ತುಗೊಳಿಸಿ ಆದೇಶಿಸಿದ್ದರು.

ಮೇಲೆ ಓದಲಾದ (1)ರ ಆದೇಶದ ವಿರುದ್ಧ ಶ್ರೀ ಬಿ.ಎಸ್.ರಾಮಕೃಷ್ಣ, ಗ್ರಾಮ ಪಂಚಾಯಿತಿ ಕಾರ್ಯದರ್ಶಿರವರು ಸರ್ಕಾರಕ್ಕೆ ದಿನಾಂಕ:03-11-2017ರಂದು ಮೇಲ್ಮನವಿ ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯಲ್ಲಿ ದಿನಾಂಕ:27-06-2017ರಂದು ಜರುಗಿದ ಗ್ರಾಮಸಭೆಯಲ್ಲಿ ನೋಡಲ್ ಆಫೀಸರ್‌ರವರು ಹಾಜರಿದ್ದರು ಹಾಗೂ ಅಂದು ನಡೆದ ಗ್ರಾಮ ಸಭೆಯ ನಿರ್ಣಯವನ್ನು ದಾಖಿಸಿರುವುದಾಗಿ ತಿಳಿಸಿರುತ್ತಾರೆ.

ದಿನಾಂಕ:30-06-2017ರ ವರೆಗೆ ತಾವು ಕಛೇರಿಗೆ ಹಾಜರಾಗಿರುವುದಾಗಿ ತಿಳಿಸಿದ್ದು, ತದನಂತರ ಅನಾರೋಗ್ಯದ ನಿಮಿತ್ತ ತಾವು ಕರ್ತವ್ಯಕ್ಕೆ ಹಾಜರಾಗಲು ಸಾಧ್ಯವಾಗಿರಲಿಲ್ಲ. ಆದರೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಇವರು ಸಂಬಂಧಿಸಿದ ದಾಖಲಾತಿಗಳನ್ನು ಸರಿಯಾಗಿ ಪರಿಶೀಲಿಸದೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸುಳ್ಳುವರದಿಯನ್ನು ಸಲ್ಲಿಸಿರುತ್ತಾರೆ. ಆದುದರಿಂದ ಈ ಬಗ್ಗೆ ಸಂಬಂಧಪಟ್ಟ ದಾಖಲಾತಿಗಳನ್ನು ಪರಿಶೀಲಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಮಾನತ್ತು ಆದೇಶವನ್ನು ರದ್ದುಪಡಿಸಬೇಕೆಂದು ಕೋರಿರುತ್ತಾರೆ.

ಈ ಮೇಲ್ಮನವಿಯ ಬಗ್ಗೆ ದಿನಾಂಕ:06-03-2018ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಅರ್ಜಿದಾರರು ಗೈರುಹಾಜರಾಗಿರುತ್ತಾರೆ ಹಾಗೂ ಗುಡಿಬಂಡೆ ತಾಲ್ಲೂಕು ಪಂಚಾಯಿತಿ

ಕಾರ್ಯನಿರ್ವಾಹಕ ಅಧಿಕಾರಿಯವರ ಪರವಾಗಿ ಸಹಾಯಕ ನಿರ್ದೇಶಕರು(ಗ್ರಾ.ಉ)ರವರು ಹಾಜರಿದ್ದರು. ಸದರಿ ಅಧಿಕಾರಿಯವರು ಅರ್ಜಿದಾರರವು ಸೇವೆಗೆ ಪುನರ್‌ನಿಯುಕ್ತಿಗೊಳಿಸಿರುವ ಆದೇಶವನ್ನು ಸಲ್ಲಿಸಿದರು.

ಈ ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಕಡತಗಳನ್ನು ಪರಿಶೀಲಿಸಲಾಯಿತು. ಅರ್ಜಿದಾರರಾದ ಶ್ರೀ ಬಿ.ಎಸ್.ರಾಮಕೃಷ್ಣವರರನ್ನು ಸೇವೆಗೆ ಪುನರ್‌ನಿಯುಕ್ತಿಗೊಳಿಸಿದ್ದು ಹಾಗೂ ಸದರಿ ನೌಕರರು ವಿಚಾರಣೆಗೆ ಗೈರು ಹಾಜರಾದ ಹಿನ್ನೆಲೆಯಲ್ಲಿ ಮೇಲ್ಮನವಿ ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 824 ಗ್ರಾಪಂಕಾ 2017**
**ಬೆಂಗಳೂರು, ದಿನಾಂಕ:03-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ)ನಿಯಮಗಳು 1957ರ ನಿಯಮ 25(1)ರಡಿಯಲ್ಲಿ ಶ್ರೀ ಬಿ.ಎಸ್.ರಾಮಕೃಷ್ಣ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸೋಮೇನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉಲ್ಲೋಡು ಗ್ರಾಮ ಪಂಚಾಯಿತಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಮೇಲ್ಮನವಿಯನ್ನು ಪರಿಶೀಲಿಸಲಾಯಿತು. ಮೇಲ್ಮನವಿದಾರರು ಸೇವೆಗೆ ಪುನರ್‌ನಿಯುಕ್ತಿಗೊಂಡಿದ್ದು ಹಾಗೂ ಸದರಿ ನೌಕರರು ವಿಚಾರಣೆಗೆ ಗೈರು ಹಾಜರಾದ ಹಿನ್ನೆಲೆಯಲ್ಲಿ ಮೇಲ್ಮನವಿ ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/4/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
4) ಶ್ರೀ ಬಿ.ಎಸ್.ರಾಮಕೃಷ್ಣ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸೋಮೇನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉಲ್ಲೋಡು ಗ್ರಾಮ ಪಂಚಾಯಿತಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
5) ಶಾಖಾ ರಕ್ಷಕ ಪ್ರತಿ.
6) ಗಣಕಕೋಶ